ಪತ್ರಕರ್ತರಿಗೆ ಆರೋಗ್ಯ ವಿಮೆ ಯೋಜನೆ

1452(968), ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ರಾಜ್ಯದಲ್ಲಿರುವ ಪತ್ರಕರ್ತರ ಸಂಖ್ಯೆ ಎಷ್ಟು;

ಆ) ಪತ್ರಕರ್ತರಿಗೆ ಆರೋಗ್ಯ ವಿಮೆ ಯೋಜನೆ ಜಾರಿಗೆ ತರಲು ಸರ್ಕಾರ ನಿರ್ಧರಿಸಿದೆಯೇ;

ಇ) ಹಾಗಿದ್ದಲ್ಲಿ, ಆರೋಗ್ಯ ವಿಮೆ ಯೋಜನೆ ಎಲ್ಲಾ ಪತ್ರಿಕೆಗಳ, ಸಣ್ಣ ನಿಯತಕಾಲಿಕ ಇತ್ಯಾದಿ ಪತ್ರಕರ್ತರಿಗೂ ಅನ್ವಯವಾಗುತ್ತದೆಯೇ;

ಈ) ಇಲ್ಲದಿದ್ದಲ್ಲಿ, ಈ ವಿಮೆಯು ಯಾವ ವರ್ಗದ ಪತ್ರಕರ್ತರಿಗೆ ಅನ್ವಯವಾಗುತ್ತದೆ;

ಉ) ಆರೋಗ್ಯ ವಿಮೆ ಯೋಜನೆಯನ್ನು ಎಲ್ಲಾ ಪತ್ರಕರ್ತರಿಗೂ ವಿಸ್ತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಆರ್.ರೋಷನ್‌ಬೇಗ್ (ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರು)

ಅ) ರಾಜ್ಯದಲ್ಲಿ 1337 ಮಾನ್ಯತೆ ಪಡೆದ ಪತ್ರಕರ್ತರಿದ್ದಾರೆ.

ಆ) ನಿರ್ಧರಿಸಿದೆ.

ಇ) ಮೊದಲ ಹಂತದಲ್ಲಿ ಈ ಯೋಜನೆಯನ್ನು ಮಾನ್ಯತೆ ಪಡೆದ ಪತ್ರಕರ್ತರಿಗೆ ಮಾತ್ರ ವಿಸ್ತರಿಸಲು ಉದ್ದೇಶಿಸಲಾಗಿದೆ. ಯೋಜನೆಯ ಯಶಸ್ಸನ್ನು ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಈ) ಪ್ರಸ್ತುತ ಈ ಯೋಜನೆ ಮಾನ್ಯತೆ ಪಡೆದ ಪತ್ರಕರ್ತರಿಗೆ ಮಾತ್ರ ಅನ್ವಯವಾಗಲಿದೆ.

ಉ) ಈ ಪ್ರಶ್ನೆ ಈಗ ಉದ್ಭವವಾಗುವುದಿಲ್ಲ.